ಪ-330
ಕ್ರ - 59 - ಶಂಖ್ಯೆ

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪುಟ್ಟಣ್ಣ ಇವರು ನಿಯಮ 330 ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಹೇಳಿಕೆ**

**ಸೂಚನೆ**

ದಿನಾಂಕ:31.12.2015ರ ಹಿಂದೆ ವಯೋ ನಿವೃತ್ತಿ, ಮರಣ, ರಾಜೀನಾಮೆ ಮತ್ತು ಇನ್ನಿತರೆ ಕಾರಣಗಳಿಂದ ಖಾಲಿಯಾಗಿರುವ ಅನುದಾನಿತ ಪದವಿ ಮಹಾವಿದ್ಯಾಲಯಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿತ್ತು. ಆದರೆ, ಇ-ಪೋರ್ಟಲ್ ತಾಂತ್ರಿಕ ದೋಷ ಮತ್ತು ಕೋವಿಡ್-19 ಕಾರಣ ನೀಡಿ ತಡೆಹಿಡಿಯಲಾದ ಪ್ರಕ್ರಿಯೆಯು ಈಗ ಪ್ರಾರಂಭವಾಗಿದ್ದು, ಈಗ ಅನೇಕ ಅಭ್ಯರ್ಥಿಗಳ ವಯೋಮಿತಿ ಮೀರಿದೆ. ಅಂತಹ ಅಭ್ಯರ್ಥಿಗಳಿಗೆ ಹುದ್ದೆಗಳನ್ನು ಅನುಮೋದನೆ ಮಾಡಲು 2 ವರ್ಷಗಳ ವಯೋಮಿತಿ ಸಡಿಲಿಕೆ ನೀಡಿ ನ್ಯಾಯ ಒದಗಿಸುವ ಕುರಿತು.

**ಹೇಳಿಕೆ**

ಸರ್ಕಾರದ ಪತ್ರ ಸಂಖ್ಯೆ:ಇಡಿ/240/ಯುಪಿಸಿ/ 2014, ದಿನಾಂಕ:01.09.2017 ರಲ್ಲಿ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ದಿನಾಂಕ:31.12.2015ರೊಳಗೆ ನಿವೃತ್ತಿ, ಮರಣ, ರಾಜೀನಾಮೆ ಹಾಗೂ ಇತರೆ ಕಾರಣಗಳಿಂದ ಖಾಲಿ ಇರುವ ಬೋಧಕರ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಿಕೊಳ್ಳಲು ಅನುಮತಿ ನೀಡಲಾಗಿತ್ತು. ಆ ಸಂದರ್ಭದಲ್ಲಿ ಬೋಧಕರ ಹುದ್ದೆಗೆ ಅಭ್ಯರ್ಥಿಗಳ ಗರಿಷ್ಠ ವಯೋಮಿತಿಯು ಸಾಮಾನ್ಯ ಅಭ್ಯರ್ಥಿಗಳಿಗೆ-35 ವರ್ಷಗಳು, ಇತರೆ ಹಿಂದುಳಿದ ವರ್ಗಗಳ ಪ್ರವರ್ಗ-II(a), II(b), III(a) ಮತ್ತು III(b) ಗಳಿಗೆ-38 ವರ್ಷಗಳು ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-I ರ ಅಭ್ಯರ್ಥಿಗಳಿಗೆ 40 ವರ್ಷಗಳೆಂದು ನಿಗಧಿಯಾಗಿತ್ತು.

ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಬೋಧಕರ ಹುದ್ದೆಯ ನೇರ ನೇಮಕಾತಿಗಾಗಿ ಸರ್ಕಾರದ ಆದೇಶ ಸಂಖ್ಯೆ:ಇಡಿ/49/ಯುಪಿಸಿ/2018, ದಿನಾಂಕ: 20.06.2018 ರಲ್ಲಿ ಗರಿಷ್ಠ ವಯೋಮಿತಿಯನ್ನು ಹೆಚ್ಚಿಸಿದ್ದು, ಅದರಂತೆ, ಸಾಮಾನ್ಯ ಅಭ್ಯರ್ಥಿಗಳಿಗೆ-40 ವರ್ಷಗಳು, ಇತರೆ ಹಿಂದುಳಿದ ವರ್ಗಗಳ ಪ್ರವರ್ಗ-II(a), II(b), III(a) ಮತ್ತು III(b) ಗಳಿಗೆ-43 ವರ್ಷಗಳು ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-I ಕ್ಕೆ-45 ವರ್ಷಗಳೆಂದು ಹೆಚ್ಚಿಸಲಾಗಿದೆ ಹಾಗೂ ಸರ್ಕಾರದ ಸೇರ್ಪಡೆ ಆದೇಶ ಸಂಖ್ಯೆ:ಇಡಿ/87/ಯುಪಿಸಿ/2016, ದಿನಾಂಕ:13.12.2018 ರಲ್ಲಿ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಪೂರ್ಣಕಾಲಿಕ ಬೋಧನಾನುಭವ ಹೊಂದಿರುವ ಅಭ್ಯರ್ಥಿಗಳಿಗೆ ಗರಿಷ್ಠ ವಯೋಮಿತಿಯನ್ನು ನಿಗದಿಪಡಿಸುವುದರೊಂದಿಗೆ ಅವರು ಬೋಧನಾನುಭವ ಹೊಂದಿರುವ ಸೇವಾವಧಿ ಅಥವಾ 5 ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ಅವಧಿಗೆ ಗರಿಷ್ಠ ವಯೋಮಿತಿಯಲ್ಲಿ ವಿನಾಯಿತಿ ನೀಡಲು ಸರ್ಕಾರವು ಅವಕಾಶ ಕಲ್ಪಿಸಿದೆ

ಪ್ರಸ್ತುತ ಕೆಲವು ಮಾನ್ಯ ಶಾಸಕರುಗಳಿಂದ ಹಾಗೂ ಸಾರ್ವಜನಿಕರುಗಳಿಂದ ಕೋವಿಡ್-19ರ ಹಿನ್ನೆಲೆಯಲ್ಲಿ ಖಾಸಗಿ ಅನುದಾನಿತ ಕಾಲೇಜುಗಳ ಬೋಧಕರ ನೇಮಕಾತಿಯಲ್ಲಿ 02 ವರ್ಷಗಳ ವಯೋಮಿತಿ ಸಡಿಲಿಸುವಂತೆ ಟಿಪ್ಪಣಿಗಳು ಹಾಗೂ ಕೋರಿಕೆಗಳು ಸ್ವೀಕೃತವಾಗಿದ್ದು, ಸದರಿ ವಿಷಯವು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.

ಇಡಿ 177 ಯುಪಿಸಿ 2022

**(ಡಾ: ಅಶ್ವಥ್ ನಾರಾಯಣ ಸಿ.ಎನ್.)**
ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ. ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು